ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 01–09–2020

# ಪತ್ರಿಕಾ ಪ್ರಕಟಣೆ

## ಕರ್ನಾಟಕ ಲೋಕ ಸೇವಾ ಆಯೋಗ
## ಪರಿಷ್ಕೃತ ಕೀ ಉತ್ತರ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 01, ಕರ್ನಾಟಕ ವಾರ್ತೆ :**

ಕರ್ನಾಟಕ ಲೋಕ ಸೇವಾ ಆಯೋಗವು ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಸಹಾಯಕ ನಿಯಂತ್ರಕರು ಗ್ರೂಪ್ 'ಎ' ವೃಂದದ ಒಟ್ಟು 54 ಹುದ್ದೆಗಳ ಪೂರ್ವಭಾವಿ ಪರೀಕ್ಷೆಯನ್ನು ಆಗಸ್ಟ್ 17 ರಂದು ನಡೆಸಿದ್ದು, ಸದರಿ ಪರೀಕ್ಷೆಯ ಕೀ ಉತ್ತರಗಳನ್ನು ಆಗಸ್ಟ್ 20 ರಂದು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ಕೀ ಉತ್ತರಗಳಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಸಲ್ಲಿಸಿದ್ದ ಆಕ್ಷೇಪಣೆಗಳ್ನು ಪರಿಶೀಲಿಸಿ, ಪರಿಷ್ಕೃತ ಕೀ ಉತ್ತರಗಳನ್ನು ಆಯೋಗದ ವೆಬ್‌ಸೈಟ್ http://kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಸೆಪ್ಟೆಂಬರ್ 01, ಕರ್ನಾಟಕ ವಾರ್ತೆ :**

ಆಹಾರ, ನಾಗರಿಕ ಸರರಾಜು ಮತ್ತು ಗ್ರಾಹಕರ ವ್ಯವಹಾರ ಸಚಿವರಾದ ಕೆ. ಗೋಪಾಲಯ್ಯ ಅವರು ಸೆಪ್ಟೆಂಬರ್ 03 ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 01, ಕರ್ನಾಟಕ ವಾರ್ತೆ :

ನಗರಾಭಿವೃದ್ಧಿ ಸಚಿವ ಬಿ. ಎ. ಬಸವರಾಜು ಅವರು ಸೆಪ್ಟೆಂಬರ್ 3 ರಿಂದ 7 ರವರೆಗೆ ತುಮಕೂರು ಹಾಸನ, ಚಿಕ್ಕಮಗಳೂರು, ದಾವಣಗೆರೆ, ಹಾವೇರಿ, ಧಾರವಾಡ, ಬಾಗಲಕೋಟೆ ಮತ್ತು ಗದಗ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಸೆಪ್ಟೆಂಬರ್ 7 ರಂದು ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕೈಗಾರಿಕಾ ತರಬೇತಿ ಸಂಸ್ಥೆಯ ವಿವಿಧ ವೃತ್ತಿಗಳ ತರಬೇತಿಗೆ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 01, ಕರ್ನಾಟಕ ವಾರ್ತೆ :

2020-21ನೇ ಸಾಲಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ವಿವಿಧ ವೃತ್ತಿಗಳಲ್ಲಿ ತರಬೇತಿಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಗಸ್ಟ್ 2020ನೇ ಸಾಲಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಡೈರಿ ವೃತ್ತ, ಹೊಸೂರು ರಸ್ತೆ, ಬೆಂಗಳುರು-29 ಇಲ್ಲಿ ವಿವಿಧ ವೃತ್ತಿಗಳಲ್ಲಿ ತರಬೇತಿಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಅಭ್ಯರ್ಥಿಗಳು www.emptrg.kar.nic.in ಮುಖಾಂತರ ಸೆಪ್ಟೆಂಬರ್ 10 ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಪು), ಹೊಸೂರು ರಸ್ತೆ, ಬೆಂಗಳೂರು-29 ಇವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಗಳ ಪೂರ್ವಭಾವಿ ಪರೀಕ್ಷೆ

ಬೆಂಗಳೂರು, ಸೆಪ್ಟಂಬರ್ 01(ಕರ್ನಾಟಕ ವಾರ್ತೆ):

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗ್ರೂಪ್ 'ಎ' ವೃಂದದ ಒಟ್ಟು 24 ಹುದ್ದೆಗಳಿಗೆ ಪೂರ್ವಭಾವಿ ಪರೀಕ್ಷೆಯನ್ನು ನಿಗದಿಪಡಿಸಿದೆ.

ಪರೀಕ್ಷೆಯನ್ನು ಓ.ಎಂ.ಆರ್ ಮಾದರಿಯಲ್ಲಿ ಬೆಂಗಳೂರು ಕೇಂದ್ರದಲ್ಲಿ ದಿನಾಂಕ 11-10-2020ರ ಭಾನುವಾರ ಬೆಳಿಗ್ಗೆ 10-100 ರಿಂದ 12-00 ಗಂಟೆಯವರೆಗೆ ಪತ್ರಿಕೆ-1 ಸಾಮಾನ್ಯ ಜ್ಞಾನ ಹಾಗೂ ಮಧ್ಯಾಹ್ನ 02-30 ರಿಂದ 04-30 ಗಂಟೆಯವರೆಗೆ ಪತ್ರಿಕೆ-2 ಅಪ್ಟಿಟ್ಯೂಟ್ ಟೆಸ್ಟ್ ನಿಗದಿಪಡಿಸಿದೆ. ಹೆಚ್ಚಿನ ಮಾಹಿತಿಗಾಗಿ ಅಂತರ್ಜಾಲ http://kpsc.kar.nic.in ನ್ನು ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಳಿಸಿದೆ.

## ಜೀವರಕ್ಷಕ (ಲೈಫ್ ಗಾರ್ಡ್), ಜಿಮ್/ಫಿಟ್ನೆಸ್ ತರಬೇತುದಾರರು, ಮಾರ್ಕರ್ ತರಬೇತಿ

**ಬೆಂಗಳೂರು, ಸೆಪ್ಟಂಬರ್ 01(ಕರ್ನಾಟಕ ವಾರ್ತೆ):**

ಕ್ರೀಡಾ ಕ್ಷೇತ್ರಕ್ಕೆ ಸಂಬಂಧ ಪಟ್ಟಂತೆ 2020-21ನೇ ಸಾಲಿನಲ್ಲಿ ಕ್ರಿಯಾಯೋಜನೆಯಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಪರಿಶಿಷ್ಟ ಪಂಗಡದ ಉಪಯೋಜನೆ ಅಡಿ ಯುವಜನರಿಗೆ ತರಬೇತಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಜೀವರಕ್ಷಕ(ಲೈಫ್ ಗಾರ್ಡ್), ಜಿಮ್/ಫಿಟ್ನೆಸ್ ತರಬೇತುದಾರರು, ಕ್ರೀಡಾ ಅಂಕಣ ಗುರುತುಗಾರ (ಮಾರ್ಕರ್) ತರಬೇತಿಯನ್ನು ವಸತಿ ಸಹಿತವಾಗಿ ಆಸಕ್ತ ಯುವಜನರಿಗೆ(ಯುವಕ/ಯುವತಿಗಯರಿಗೆ) ಇಲಾಖೆ ವತಿಯಿಂದ ವಿವಿಧ ವಿಭಾಗಗಳಾದ ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರಗಿ ಜಿಲ್ಲೆಗಳಲ್ಲಿ ಆಯೋಜಿಸಲು ಉದ್ದೇಶಿಸಿದೆ. ಅರ್ಜಿ ಸಲ್ಲಿಸಲು 30-09-2020 ಕೊನೆಯ ದಿನಾಂಕವಾಗಿರುತ್ತದೆ.

ಸಂಬಂಧ ಪಟ್ಟ ಜಿಲ್ಲೆಯ ಉಪ/ಸಹಾಯಕ ನಿರ್ದೇಶಕರು ತಮ್ಮ ಜಿಲ್ಲೆಯಲ್ಲಿ ಸ್ಥಳೀಯವಾಗಿ ವ್ಯಾಪಕ ಪ್ರಚಾರ ನೀಡಿ ಆಸಕ್ತ ಯುವಕ/ಯವತಿಯರಿಂದ ಅರ್ಜಿಗಳನ್ನು ಪಡೆದು ಕೇಂದ್ರ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟಂಬರ್ 01(ಕರ್ನಾಟಕ ವಾರ್ತೆ):**

ಆಗಸ್ಟ್ 2020 ನೇ ಸಾಲಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ(ಪುರುಷ) ಡೈರಿ ವೃತ್ತ, ಹೊಸೂರು ರಸ್ತೆ, ಬೆಂಗಳೂರು-29 ಇಲ್ಲಿ ವಿವಿಧ ವೃತ್ತಿಗಳಲ್ಲಿ ತರಬೇತಿಗಾಗಿ ಆನ್ ಲೈನ್ ಮೂಲಕ ಪ್ರವೇಶಾತಿ ಪಡೆಯಲು ಆಸಕ್ತ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆನ್ ಲೈನ್ ಮೂಲಕ ಅರ್ಜಿಗಳನ್ನು ದಿನಾಂಕ 17-08-2020 ರಿಂದ ದಿನಾಂಕ: 10-09-2020 ರ ವರೆಗೆ ಸಲ್ಲಿಸಬಹುದು. ಅಭ್ಯರ್ಥಿಗಳು ಆನ್ ಲೈನ್ ಅರ್ಜಿಗಳನ್ನು ವೆಬ್ ಸೈಟ್ ವಿಳಾಸ: www.emptrg.kar.nic.in ನಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು/ಅಭ್ಯರ್ಥಿಗಳು ನೇರವಾಗಿ ಪ್ರಾಚಾರ್ಯರು/ಕಛೇರಿಯನ್ನು ಸಂಪರ್ಕಿಸಬೇಕಾಗಿ ಅಧಿಕೃತ ಪ್ರಕಟಣೆ ತಿಳಿಸಿದೆ.

## ಅಧಿಕಾರ ಸ್ವೀಕಾರ

**ಬೆಂಗಳೂರು, ಸೆಪ್ಟಂಬರ್ 01(ಕರ್ನಾಟಕ ವಾರ್ತೆ):**

ಎಂ. ಚಂದ್ರಪ್ಪ, ಮಾನ್ಯ ಶಾಸಕರು, ಹೊಳಲ್ಕೆರೆ ವಿಧಾನಸಭಾ ಕ್ಷೇತ್ರರವರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾಗಿ, ಕೆ ಎಸ್ ಆರ್ ಟಿ ಸಿ, ಕೇಂದ್ರ ಕಛೇರಿ, ಕೆ.ಹೆಚ್.ರಸ್ತೆ, ಬೆಂಗಳೂರು ಇಲ್ಲಿ ಅಧಿಕಾರ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ದಿವಂಗತ ಶ್ರೀ.ಪ್ರಣಬ್ ಮುಖರ್ಜಿ, ಮಾಜಿ ರಾಷ್ಟ್ರಪತಿಗಳು ರವರ ಆತ್ಮಕ್ಕೆ 2 ನಿಮಿಷ ಮೌನಚರಣೆ ಮಾಡುವ ಮೂಲಕ ಶಾಂತಿ ಕೋರಿದರು.

ಶಿವಯೋಗಿ ಸಿ.ಕಳಸದ, ಭಾಆಸೇ, ವ್ಯವಸ್ಥಾಪಕ ನಿರ್ದೇಶಕರು, ಡಾ.ರಾಮ್ ನಿವಾಸ್ ಸಪೆಟ್ ಭಾಪೊಸೇ, ನಿರ್ದೇಶಕರು ( ಭ&ಜಾ) , ಟಿ.ವೆಂಕಟೇಶ್ ,ನಿರ್ದೇಶಕರು( ಸಿ&ಪ) ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## Assumed Charge

Bengaluru, September 1(Karnataka Information)

M.Chandrappa , MLA, Holalkere Vidhansabha Constituency, today assumed the charge as Chairman , KSRTC at KSRTC Central Office, .K.H.Road, Bangalore .

While assuming the charge , 2 minutes silence was observed to the departed soul of Pranab Mukherjee, Hon'ble Ex.President .

Shivayogi C.Kalasad IAS, Managing Director, KSRTC, Dr.Ram Nivas Sepat, IPS, Director ( S&V), T.Venkatesh KAS, Director ( P&E) and other seniors' officers were present.

**ಕೇಂದ್ರ ಮತ್ತು ಕೇಂದ್ರ ಪುರಸ್ಕೃತ ಯೋಜನೆಗಳ ಪರಿಶೀಲನಾ ರಾಜ್ಯ ಸಮಿತಿ ದಿಶಾಗೆ ಸದಸ್ಯರ ನೇಮಕ**

**ಬೆಂಗಳೂರು, ಸೆಪ್ಟಂಬರ್ 01(ಕರ್ನಾಟಕ ವಾರ್ತೆ):**

ಕೇಂದ್ರ ಮತ್ತು ಕೇಂದ್ರ ಪುರಸ್ಕೃತ ಯೋಜನೆಗಳ ಪರಿಶೀಲನೆಗಾಗಿ ರಾಜ್ಯಮಟ್ಟದಲ್ಲಿ ದಿಶಾ ಸಮಿತಿಗೆ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಸಚಿವರ ಉಪಾಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ.

ಈ ಸಮಿತಿಗೆ ದಾವಣಗೆರೆ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಡಿ. ರೇವಣ್ಣ ಬಿನ್ ಚನ್ನಬಸಪ್ಪ ಬೆಣ್ಣಹಳ್ಳಿ ಗ್ರಾಮ ಹರಪ್ಪನಹಳ್ಳಿ ತಾಲ್ಲೂಕು ಬಳ್ಳಾರಿ ಜಿಲ್ಲೆ ಇವರನ್ನು ದಿಶಾ ಸಮಿತಿಯ ಸದಸ್ಯರಾಗಿ ನೇಮಕ ಮಾಡಲಾಗಿದೆ.

ದಿಶಾ ಸಮಿತಿಗೆ ಅಧಿಕಾರೇತರ ಸದಸ್ಯರಾಗಿ ವೈ.ಎಂ. ಬೆಂಡಿಗೇರಿ, 27, ಪ್ಲಾಟ್ ನಂ.43, ನವನಗರ, ಬಾಗಲಕೋಟೆ, ಶಿವಯ್ಯ ಸ್ವಾಮಿ, ನಂ. 1–51 , 1 ನೇ ಬ್ಲಾಕ್, ಕಮ್‌ಠಾಣ ತಾಲ್ಲೂಕು, ಬೀದರ್ ಜಿಲ್ಲೆ, ಜಿ.ಟಿ. ಸುರೇಶ್‌ಕುಮಾರ್ ನಂ. 8, 2 ನೇ ಮಹಡಿ, ವೈಷ್ಣವಿ ಲೇಔಟ್, ಕಲ್ಕೆರೆ ಮುಖ್ಯರಸ್ತೆ ಕೆ. ಚನ್ನಸಂದ್ರ, ಬೆಂಗಳೂರು ಇವರನ್ನು ನೇಮಕ ಮಾಡಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.